<u>ಕರ್ನಾಟಕ ವಿಧಾನ ಪರಿಷತ್ತು</u>

ಸಂಖ್ಯೆ:ಕವಿಪ/ಆ-1/161/ಸು/2021

ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲ,
ಅಂಚೆ ಪೆಟ್ಟಿಗೆ ಸಂಖ್ಯೆ:5079,ವಿಧಾನ ಸೌಧ,
ಬೆಂಗಳೂರು-560 001, ದಿನಾಂಕ: 22-05-2021

**<u>ಸುತ್ತೋಲೆ</u>**

ಉಲ್ಲೇಖ: 1. ಸಿಆಸುಇ:87:ಡಿಇವಿ:2021, ದಿನಾಂಕ: 27-04-2021
2. ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 158 ಟಿಎನ್‌ಆರ್ 2020, ದಿನಾಂಕ 07-05-2021
3. ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 158 ಟಿಎನ್‌ಆರ್ 2020, ದಿನಾಂಕ 21-05-2021

@@@@@

ಕರ್ನಾಟಕ ರಾಜ್ಯದಲ್ಲಿ ಕೊರೋನಾ ವೈರಸ್ (ಕೋವಿಡ್-19)ನ ಎರಡನೇ ಅಲೆಯು ವ್ಯಾಪಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ ಉಲ್ಲೇಖ (1)ರ ಆದೇಶದನ್ವಯ ದಿನಾಂಕ 12-05-2021ರವರೆಗೆ ಕಛೇರಿ ಹಾಜರಾತಿಯಿಂದ ವಿನಾಯಿತಿಯನ್ನು ನೀಡಲಾಗಿತ್ತು.

ಆದರೆ, ಪ್ರತಿ ದಿನವು ಕೊರೋನಾ ವೈರಸ್ (ಕೋವಿಡ್-19)ನ ಪ್ರಕರಣಗಳು ತೀವ್ರವಾಗಿ ಹೆಚ್ಚಳವಾಗುತ್ತಿರುವುದರಿಂದ, ಅದರ ಹರಡುವಿಕೆಯ ಸರಪಳಿಯನ್ನು ತುಂಡರಿಸಲು ಸರ್ಕಾರವು ಸದರಿ ಆದೇಶವನ್ನು ಪರಿಷ್ಕರಿಸಿ ಉಲ್ಲೇಖ (2)ರ ಆದೇಶದಲ್ಲಿ ದಿನಾಂಕ: 10-05-2021ರ ಬೆಳಿಗ್ಗೆ 06-00 ಗಂಟೆಯಿಂದ 24-05-2021ರ ಬೆಳಿಗ್ಗೆ 06-00 ಗಂಟೆಯವರೆಗೆ ರಾಜ್ಯದಲ್ಲಿ ಹೆಚ್ಚಿನ ಕಠಿಣ ನಿಯಮಗಳನ್ನು ಜಾರಿಗೊಳಿಸಿ ಪ್ರತ್ಯೇಕ ಮಾರ್ಗಸೂಚಿಗಳನ್ನು ಹೊರಡಿಸಿರುತ್ತದೆ.

ಮೇಲೆ ತಿಳಿಸಿದ ಮಾರ್ಗಸೂಚಿಗಳಲ್ಲಿ ನಿಗದಿಪಡಿಸಿದಂತೆ ಕಟ್ಟುನಿಟ್ಟಾದ ಕ್ರಮಗಳ ಅನುಷ್ಠಾನದಿಂದ ರಾಜ್ಯದಲ್ಲಿ ಸಕ್ರಿಯ ಮತ್ತು ಹೊಸ ಪ್ರಕರಣಗಳ ಸಂಖ್ಯೆಯಲ್ಲಿ ಸ್ಥಿರ ಕುಸಿತ ಕಂಡುಬಂದರೂ ಅರೆ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕ್ರಮೇಣ ಕೋವಿಡ್-19ರ ಪ್ರಕರಣಗಳು ಕಂಡುಬಂದಿರುವುದರಿಂದ ಕೋವಿಡ್ ಪ್ರಸರಣದ ಕೊಂಡಿಯನ್ನು ಮುರಿಯಲು ಉಲ್ಲೇಖ 2ರನ್ವಯ ದಿನಾಂಕ 07-05-2021ರಂದು ಹೊರಡಿಸಿರುವ ಮಾರ್ಗಸೂಚಿಗಳನ್ನು ದಿನಾಂಕ 07-06-2021ರ ಬೆಳಿಗ್ಗೆ 6 ಗಂಟೆಯವರೆಗೆ ಜಾರಿಯಲ್ಲಿರುವಂತೆ ಉಲ್ಲೇಖ 3ರನ್ವಯ ದಿನಾಂಕ 21-05-201ರಂದು ಆದೇಶವನ್ನು ಹೊರಡಿಸಿರುತ್ತದೆ.

ಆದುದರಿಂದ, ಈ ಸಚಿವಾಲಯದ ಎಲ್ಲಾ ಅಧಿಕಾರಿ/ನೌಕರರುಗಳಿಗೆ ದಿನಾಂಕ 06-06-2021ರವರೆಗೆ ಕಛೇರಿ ಹಾಜರಾತಿಯಿಂದ ವಿನಾಯಿತಿಯನ್ನು ಮುಂದುವರೆಸಲಾಗಿದೆ. **ಹೀಗೆ ಹಾಜರಾತಿಯಿಂದ ವಿನಾಯಿತಿ ನೀಡಲ್ಪಟ್ಟ ಎಲ್ಲಾ ಅಧಿಕಾರಿ/ನೌಕರರುಗಳು ಕೇಂದ್ರ ಸ್ಥಾನದಲ್ಲಿ ಲಭ್ಯವಿರುವುದು ಹಾಗೂ ತುರ್ತು ಕಾರಣಗಳಿದ್ದಾಗ ಮೇಲಾಧಿಕಾರಿಗಳು ಸೇವೆಯನ್ನು ಬಯಸಿದ್ದಲ್ಲಿ, ಯಾವುದೇ ಕಾರಣ ನೀಡದೇ ಕಛೇರಿಗೆ ಹಾಜರಾಗತಕ್ಕದ್ದು.**

ಶಾಸಕರ ಭವನದ ಕೆಲಸ ಕಾರ್ಯಗಳಿಗೆ ಸಂಬಂಧಿಸಿದಂತೆ ಅಲ್ಲಿನ ಅಧಿಕಾರಿ/ನೌಕರರುಗಳು ಕಾರ್ಯಗಳ ಅಗತ್ಯತೆಗೆ ಅನುಗುಣವಾಗಿ ಉಪ ಕಾರ್ಯದರ್ಶಿ (ಪ್ರ) (ಶಾಸಕರ ಭವನ) ರವರು ನಿಯೋಜಿಸಿದಂತೆ ಕಾರ್ಯನಿರ್ವಹಿಸತಕ್ಕದ್ದು.

ಈ ಸುತ್ತೋಲೆಯು ದಿನಾಂಕ 06-06-2021ರವರೆಗೆ ಅಸ್ತಿತ್ವದಲ್ಲಿರುತ್ತದೆ.

22/5/2021

(ಕೆ.ಆರ್.ಮಹಾಲಕ್ಷ್ಮಿ)
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯ

ಗೆ,

ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯದ ಎಲ್ಲಾ ಅಧಿಕಾರಿ/ನೌಕರರುಗಳಿಗೆ,
(ಶಾಸಕರ ಭವನವೂ ಸೇರಿದಂತೆ)

ಪ್ರತಿಗಳು:-

1. ಮಾನ್ಯ ಸಭಾಪತಿಯವರ ಆಪ್ತ ಕಾರ್ಯದರ್ಶಿಯವರಿಗೆ, ಕ.ವಿ.ಪ.
2. ಮಾನ್ಯ ಉಪ ಸಭಾಪತಿಯವರ ಆಪ್ತ ಕಾರ್ಯದರ್ಶಿಯವರಿಗೆ, ಕ.ವಿ.ಪ.
3. ಮಾನ್ಯ ವಿರೋಧ ಪಕ್ಷದ ನಾಯಕರ ಆಪ್ತ ಕಾರ್ಯದರ್ಶಿಯವರಿಗೆ, ಕ.ವಿ.ಪ.
4. ಮಾನ್ಯ ಸರ್ಕಾರಿ ಮುಖ್ಯ ಸಚೇತಕರ ಆಪ್ತ ಕಾರ್ಯದರ್ಶಿಯವರಿಗೆ, ಕ.ವಿ.ಪ.
5. ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರ ಆಪ್ತ ಕಾರ್ಯದರ್ಶಿಯವರಿಗೆ, ಕ.ವಿ.ಪ.
6. ಅಪರ ಕಾರ್ಯದರ್ಶಿಯವರ ಆಪ್ತ ಸಹಾಕರಿಗೆ, ಕ.ವಿ.ಪ
7. ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯದ ಹಾಗೂ ಶಾಸಕರ ಭವನದ ಸೂಚನಾ ಫಲಕಗಳಿಗೆ.
8. ಸಂಬಂಧಪಟ್ಟ ಕಡತಕ್ಕೆ/ರಕ್ಷಾ ಕಡತಕ್ಕೆ/ಬಿಡಿ ಪ್ರತಿ.